# ಜಿಡಿಪಿಗೆ ಸೇವಾ ಕ್ಷೇತ್ರದ ಕೊಡುಗೆ



**ಬೆಂಗಳೂರು:** ದೇಶದ ಐದು ಟ್ರಿಲಿಯನ್ ಜಿಡಿಪಿ ಗುರಿ ತಲುಪಲು ಸೇವಾ ಕ್ಷೇತ್ರದಿಂದಲೇ ಮೂರು ಟ್ರಿಲಿಯನ್ ಜಿಡಿಪಿ ಕೊಡುಗೆಯಿದೆ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕೆ ಹಾಗೂ ರೈಲ್ವೇ ಸಚಿವ ಪಿಯೂಶ್ ಗೋಯಲ್ ತಿಳಿಸಿದ್ದಾರೆ.

ಅರಮನೆ ಮೈದಾನದಲ್ಲಿ ನಡೆಯುತ್ತಿರುವ ಮೂರು ದಿನಗಳ ಗ್ಲೋಬಲ್ ಎಕ್ಸಿಬಿಷನ್ ಆನ್ ಸರ್ವೀಸಸ್‌ನ ಸಮಾವೇಶ ಉದ್ಘಾಟಿಸಿ ಮಾತನಾಡಿದ ಅವರು, ದೇಶದಲ್ಲಿ ಉದ್ಯೋಗ ಸೃಷ್ಟಿ ಮಾಡುವ ಅತೀ ದೊಡ್ಡ ಕ್ಷೇತ್ರ ಇದಾಗಿದೆ. ದೇಶದ ಆರ್ಥಿಕತೆಯ ಇಂಜಿನ್‌ನಂತಿರುವ ಉತ್ಪಾದನೆ ಹಾಗೂ ಸೇವಾ ಕ್ಷೇತ್ರ ಜೊತೆ ಜೊತೆಯಲ್ಲೇ ಸಾಗಬೇಕಾಗಿದೆ. ಪ್ರತ್ಯೇಕವಾದಲ್ಲಿ ಅಭಿವೃದ್ಧಿ ಸಾಧ್ಯವಿಲ್ಲ ಎಂದರು.

➘ ೧